ತುಂಗಭದ್ರಾ ನದಿಗೆ ಹಡಗಿನಾಳ ಗ್ರಾಮದ ಬ್ಯಾರೇಜ್ ನಿರ್ಮಾಣದ ಬಗ್ಗೆ

20(41): ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುಂಗಭದ್ರಾ ನದಿಗೆ ಸಿಂಧನೂರು ತಾಲ್ಲೂಕಿನ ಹಡಗಿನಾಳ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಈ ಬ್ಯಾರೇಜ್ ನಿರ್ಮಾಣಕ್ಕಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನದ ಮೊತ್ತವೆಷ್ಟು?

ಇ) ಈ ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು?

ಈ) ಈ ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ತ್ವರಿತವಾಗಿ ಪೂರೈಸಲು ಸರ್ಕಾರ ಕಾಲಮಿತಿಯನ್ನು ಏನಾದರೂ ವಿಧಿಸಿದೆಯೇ?

ಉ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಎಂದು ಮುಕ್ತಾಯ ಗೊಳಿಸಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು):

ಅ) ಇದೆ.

ಆ) 2010–11ನೇ ಸಾಲಿನಲ್ಲಿ ಸಮತೋಲನಾ ಜಲಾಶಯಗಳು, ಪಿಕಪ್‌ಗಳ ಅಡಿಯಲ್ಲಿ ರೂ.10.00 ಲಕ್ಷಗಳ ಸಾಂಕೇತಿಕ ಅನುದಾನ ನೀಡಲಾಗಿದೆ.

ಇ) ತಾಂತ್ರಿಕ ಸಲಹಾ ಸಮಿತಿ ಒಪ್ಪಿಗೆ ಪಡೆದು, ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು

ಈ) ಇಲ್ಲ.

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ.